**MAY 23, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**<><><><>**

**ಮುಖ್ಯಾಂಶಗಳು:**

<><><><>

- **ಕನ್ನಡಪರ ಹಾಗೂ ರೈತಪರ ಸಂಘಟನೆ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯಲು ಸರ್ಕಾರದ ನಿರ್ಧಾರ.**

- **ರಾಜ್ಯ ಸರ್ಕಾರ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣದಲ್ಲಿ ನಿರತವಾಗಿದೆ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

- **ತಯಾರಿಕಾ ವಲಯದ ಬಲವರ್ಧನೆ, ಕೈಗಾರಿಕಾ ಮೂಲಸೌಕರ್ಯ ಆಧುನೀಕರಣ ಮತ್ತು ಜಾಗತಿಕ ಮಟ್ಟದ ಉದ್ಯಮ ಸ್ಥಾಪನೆಗೆ ಕೇಂದ್ರ ಸರ್ಕಾರದ ಆದ್ಯತೆ.**

- **ಕೇಂದ್ರ ಸರಕಾರ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿ, ಹಳೆಯ ಪದ್ಧತಿಯಂತೆ ಸಿಇಟಿಗೆ ಅವಕಾಶ ನೀಡಬೇಕು – ಸಚಿವ ಡಾ.ಎಂ.ಸಿ. ಸುಧಾಕರ್.**

- **ಕರ್ನಾಟಕದ 4 ಸ್ಥಾನಗಳು ಸೇರಿದಂತೆ, 10 ರಾಜ್ಯಗಳ 24 ರಾಜ್ಯಸಭಾ ಸ್ಥಾನಗಳಿಗೆ, ಜೂನ್ 18ರಂದು ಚುನಾವಣೆ ಘೋಷಣೆ.**

**<><><>**

**ಕನ್ನಡಪರ ಹಾಗೂ ರೈತಪರ ಸಂಘಟನೆ ವಿರುದ್ಧ, ಹಲವಾರು ವರ್ಷಗಳಿಂದ** ದಾಖಲಾಗಿರುವ ಪ್ರಕರಣಗಳನ್ನು, ಹಿಂಪಡೆಯುವ ನಿರ್ಧಾರವನ್ನು, ರಾಜ್ಯ ಸಚಿವ ಸಂಪುಟ ತೆಗೆದುಕೊಂಡಿದೆ ಎಂದು ಗೃಹ ಸಚಿವ ಡಾಕ್ಟರ್ ಜಿ.ಪರಮೇಶ್ವರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಘಟನೆಗಳ ವಿರುದ್ಧದ ಒಟ್ಟು 52 ಪ್ರಕರಣಗಳನ್ನು, ಇದೀಗ ವಾಪಸ್ ಪಡೆಯಲು ನಿರ್ಧರಿಸಲಾಗಿದೆ. ಪ್ರಕರಣಗಳನ್ನು ಹಿಂತೆಗೆದುಕೊಳ್ಳುವಂತೆ ಸಂಘಟನೆಗಳು

ಹಲವಾರು ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು ಎಂದು ಹೇಳಿದರು. ಪ್ರಕರಣಗಳ ಕುರಿತಂತೆ ಪರಾಮರ್ಶಿಸಲು, ರಾಜ್ಯ ಸರ್ಕಾರವು ಸಂಪುಟ ಉಪಸಮಿತಿಗೆ ಶಿಫಾರಸು ಮಾಡಿತ್ತು. ಇಲ್ಲಿ ಪ್ರತಿಯೊಂದು ಪ್ರಕರಣದ ಬಗ್ಗೆ, ವಯಕ್ತಿಕವಾಗಿ ಚರ್ಚೆ ನಡೆಸಿದ ನಂತರ, ಕಾನೂನಾತ್ಮಕವಾಗಿ ಇವುಗಳನ್ನು ವಾಪಸ್ ಪಡೆಯಲು ಅವಕಾಶವಿದೆ ಎಂದು ತೀರ್ಮಾನ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ಇದೀಗ, ಕನ್ನಡಪರ ಮತ್ತು ರೈತಪರ ಸಂಘಟನೆ ವಿರುದ್ಧ ದಾಖಲಾದ 52 ಪ್ರಕರಣಗಳನ್ನು ಹಿಂದೆಗೆದುಕೊಳ್ಳಲಾಗುತ್ತಿದೆ ಎಂದು ಹೇಳಿದರು.

<><><>

**ರಾಜ್ಯ ಸರ್ಕಾರ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣದಲ್ಲಿ** ನಿರತವಾಗಿದೆ ಎಂದು, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ, ಮಾಹಿತಿ ಹಂಚಿಕೊಂಡಿರುವ ಅವರು, ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕಾನೂನು ರಕ್ಷಕರಿಗೆ, ರಕ್ಷಣೆ ಇಲ್ಲದಂತಾಗಿದೆ. ಗಲಭೆಕೋರರನ್ನು ಸರ್ಕಾರ ಬಿಡುಗಡೆ ಮಾಡುತ್ತಿರುವುದು ಖಂಡನೀಯ ಎಂದು ಹೇಳಿದ್ದಾರೆ. ಆಳಂದ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ, 100ಕ್ಕೂ ಹೆಚ್ಚಿನ ಆರೋಪಿಗಳ 7 ಕ್ರಿಮಿನಲ್ ಪ್ರಕರಣಗಳನ್ನು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಹಿಂಪಡೆದಿರುವುದು ಸರಿಯಲ್ಲ. ರೈತರು, ಕನ್ನಡಪರ ಹೋರಾಟಗಾರರ ಪ್ರತಿಭಟನೆಯ ಪ್ರಕರಣಗಳನ್ನು, ಗಲಭೆಕೋರರ ಪ್ರಕರಣಗಳೊಂದಿಗೆ ಸೇರಿಸುವ ಕ್ರಮವೂ ಒಳ್ಳೆಯ ಬೆಳವಣಿಗೆಯಲ್ಲ ಎಂದು ತಿಳಿಸಿದ್ದಾರೆ.

<><><>

**ಕಲಬುರಗಿ ಜಿಲ್ಲೆಯಲ್ಲಿ ಪಿಎಂ ಮಿತ್ರ ಟೆಕ್ಸ್ ಟೈಲ್ಸ್ ಪಾರ್ಕ್ ನಿರ್ಮಿಸುವ ಸಂಬಂಧ** ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಮಹತ್ವದ ಸಭೆ ನಡೆಸಲಾಯಿತು ಹಾಗೂ ರಾಜ್ಯದ ಟೆಕ್ಸ್ ಟೈಲ್ಸ್ ಉದ್ಯಮಕ್ಕೆ ಹೊಸ ಆಯಾಮ ನೀಡುವ ಈ ಮಹತ್ವಾಕಾಂಕ್ಷಿ ಯೋಜನೆಯ ಮೊದಲ ಹಂತವನ್ನು ಕೆಐಎಡಿಬಿ ಮೂಲಕ ಜಾರಿಗೊಳಿಸುವ ಕುರಿತು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು ಎಂದು ಕೈಗಾರಿಕಾ ಖಾತೆ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಈ ಕುರಿತು ತಿಳಿಸಿರುವ ಅವರು; ಜೊತೆಗೆ ಯೋಜನೆಗೆ ಅಗತ್ಯವಾದ ಆಡಳಿತಾತ್ಮಕ ಅನುಮೋದನೆಗಾಗಿ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲು ಸಹ ನಿರ್ಧರಿಸಲಾಯಿತು ಎಂದಿದ್ದಾರೆ. ಈ ಟೆಕ್ಸೈಲ್ಸ್ ಪಾರ್ಕ್ ಸ್ಥಾಪನೆಯಿಂದ ಕಲಬುರ್ಗಿ ಭಾಗದಲ್ಲಿ ಭಾರಿ ಪ್ರಮಾಣದ ಹೂಡಿಕೆ, ಸಾವಿರಾರು ಉದ್ಯೋಗಾವಕಾಶಗಳು ಹಾಗೂ ಜವಳಿ ಕ್ಷೇತ್ರದಲ್ಲಿ ಸಮಗ್ರ ಕೈಗಾರಿಕಾ ಪರಿಸರ ನಿರ್ಮಾಣವಾಗಲಿದ್ದು, ಹೈದರಾಬಾದ್-ಕರ್ನಾಟಕ ಭಾಗದ ಆರ್ಥಿಕ ಅಭಿವೃದ್ಧಿಗೆ ಹೊಸ ಚೈತನ್ಯ ದೊರೆಯಲಿದೆ ಎಂದೂ ಸಚಿವರು ಅಭಿಪ್ರಾಯಪಟ್ಟಿದ್ದಾರೆ.

<><><>

**ಪಶ್ಚಿಮ ಬಂಗಾಳದಲ್ಲಿ ಎಸ್ಐಆರ್‌ನಿಂದಾಗಿ ಈಗಾಗಲೇ ಲಕ್ಷಾಂತರ ಮಂದಿ ಮತದಾನದ** ಹಕ್ಕನ್ನು ಕಳೆದುಕೊಂಡಿದ್ದಾರೆ. ಹಾಗಾಗಿ ಕರ್ನಾಟಕದಿಂದ **ಎಸ್ಐಆರ್** ವಿರುದ್ಧ ಕಾನೂನು ಹೋರಾಟ ಮುಂದುವರಿಯಲಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು; ಚುನಾವಣಾ ಆಯೋಗ, ಐಟಿ, ಇಡಿಯನ್ನು ದುರ್ಬಳಕೆ ಮಾಡಲಾಗುತ್ತಿದೆ. ಇದು ಅತ್ಯಂತ ಗಂಭೀರ ವಿಷಯ ಎಂದರು. ಪಶ್ಚಿಮ ಬಂಗಾಳದಲ್ಲಿ ಯಾವುದೋ ಎಐ ಆಧರಿತ ಸಾಫ್ಟ್ ವೇರ್ ಉಪಯೋಗಿಸಿಕೊಂಡು ಕೆಲವೊಂದು ಮತಗಳನ್ನು ತೆಗೆಯುವ ಕೆಲಸ ಆಗಿದೆ. ಬಿಹಾರದಲ್ಲಿ ಸಾಫ್ಟ್ವೇರ್ ಇರಲಿಲ್ಲ. ಅದನ್ನು ಪಶ್ಚಿಮ ಬಂಗಾಳದಲ್ಲಿ ಬಳಸಿದರು.

ಕರ್ನಾಟಕದಲ್ಲಿ, ಪಂಜಾಬ್‌ನಲ್ಲಿ ಏನು ಮಾಡುತ್ತಾರೋ ಗೊತ್ತಿಲ್ಲ. ಮುಖ್ಯ ಚುನಾವಣಾ ಆಯೋಗಕ್ಕೆ ಪರಮಾಧಿಕಾರ ನೀಡಲಾಗಿದೆ. ಕೋರ್ಟ್‌ಗಳು ಕೂಡಾ ಚುನಾವಣಾ ಆಯೋಗವನ್ನು ಪ್ರಶ್ನಿಸುವಂತಿಲ್ಲ. ಅಂತಹ ಕಾನೂನು ತರಲಾಗಿದೆ ಎಂದರು.

<><><>

**ತಯಾರಿಕಾ ವಲಯದ ಬಲವರ್ಧನೆ, ಕೈಗಾರಿಕಾ ಮೂಲಸೌಕರ್ಯ ಆಧುನೀಕರಣ** ಮತ್ತು ಜಾಗತಿಕ ಮಟ್ಟದ ಉದ್ಯಮ ಸ್ಥಾಪನೆಗೆ, ಕೇಂದ್ರ ಸರ್ಕಾರ ಆದ್ಯತೆ ನೀಡಿದೆ ಎಂದು, ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಕೇರಳದ ಕಲಮಚೇರಿಯ ಎಚ್.ಎಂ.ಟಿ. ಘಟಕಕ್ಕೆ ಭೇಟಿ ನೀಡಿದ ಅವರು, ಎಚ್.ಎಂ.ಟಿ. ಕಾರ್ಖಾನೆ ಭಾರತದ ಕೈಗಾರಿಕಾ ಮತ್ತು ಇಂಜಿನೀಯರಿಂಗ್ ಕೌಶಲ್ಯದ ಸಂಕೇತವಾಗಿದೆ. ರಾಷ್ಟ್ರದ ಉತ್ಪಾದನಾ ವಲಯ ಬಲಪಡಿಸಲು, ಕಳೆದ ಹಲವು ದಶಕಗಳಿಂದ, ಗಮನಾರ್ಹ ಕೊಡುಗೆ ನೀಡಿದೆ ಎಂದರು. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ಪರಿಕಲ್ಪನೆ ಅನುಸಾರ, ಆತ್ಮನಿರ್ಭರ ಭಾರತ ಮತ್ತು ವಿಕಸಿತ ಭಾರತ ಗುರಿ ಸಾಧನೆಯಲ್ಲಿ, ತಯಾರಿಕಾ ವಲಯ ಮಹತ್ವದ ಜವಾಬ್ದಾರಿ ನಿಭಾಯಿಸುವುದನ್ನು, ಖಾತ್ರಿಪಡಿಸಲು ಸಕಲ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

<><><>

**ಕೇಂದ್ರ ಸರಕಾರ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿ, ಹಳೆಯ ಪದ್ಧತಿಯಂತೆ** ಆಯಾ ರಾಜ್ಯದಲ್ಲಿಯೇ ಸಿಇಟಿ ಮೂಲಕ ವೈದ್ಯಕೀಯ ಶಿಕ್ಷಣ ಪ್ರವೇಶ ಪಡೆಯುವ ವ್ಯವಸ್ಥೆಯನ್ನು ಮುಂದುವರಿಸುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಲಾಗಿದೆ ಎಂದು ಉನ್ನತ ಶಿಕ್ಷಣ ಖಾತೆ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಸದನದಲ್ಲಿ ನಿರ್ಣಯ ಕೈಗೊಂಡು ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರ ಸರಕಾರ ತನ್ನ ಅಹಂ ಬಿಟ್ಟು ನೈಜತೆಯನ್ನು ಒಪ್ಪಿಕೊಂಡು ಈ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸಬೇಕು ಎಂದು ಆಗ್ರಹಿಸಿದರು. ನೀಟ್ ಪರೀಕ್ಷೆಯಲ್ಲಿ ಆಗಿರುವ ಗೊಂದಲದಿಂದಾಗಿ ಸುಮಾರು 22 ಲಕ್ಷ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗಿದೆ. ನೀಟ್ ಅಂಕಗಳಿಗೆ ಹೆಚ್ಚು ಮಾನ್ಯತೆ ನೀಡುವ ಬದಲು 12ನೇ ತರಗತಿಯ ಅಂಕದ ಶೇ.50ನ್ನು ಪರಿಗಣನೆಗೆ ತೆಗೆದುಕೊಳ್ಳುವುದು ಕೂಡಾ ಉತ್ತಮ. ಇಲ್ಲವಾದಲ್ಲಿ ವಿದ್ಯಾರ್ಥಿಗಳು ಶಿಕ್ಷಣದ ಅಡಿಪಾಯವಾಗಿರುವ ಇಂತಹ ಪರೀಕ್ಷೆಗಳ ಬಗ್ಗೆ ಹೆಚ್ಚಿನ ಗಮನ ಹರಿಸದೆ ಕೇವಲ ನೀಟ್ ಕಡೆಗೆ ಮಾತ್ರ ಗಮನ ಹರಿಸುತ್ತಾರೆ. ಕೇಂದ್ರ ಸರಕಾರ ತನ್ನ ತಪ್ಪನ್ನು ಒಪ್ಪಿಕೊಳ್ಳಲು ಇದು ಸರಿಯಾದ ಸಮಯವಾಗಿದೆ ಎಂದರು.

<><><>

**ಕರ್ನಾಟಕದ 4 ಸ್ಥಾನಗಳು ಸೇರಿದಂತೆ, 10 ರಾಜ್ಯಗಳ** 24 ರಾಜ್ಯಸಭಾ ಸ್ಥಾನಗಳಿಗೆ, ಜೂನ್ 18ರಂದು ಚುನಾವಣೆ ಘೋಷಿಸಲಾಗಿದೆ. ಕೇಂದ್ರ ಚುನಾವಣಾ ಆಯೋಗ, ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ್ದು, ಜೂನ್ 1ರಂದು ಅಧಿಸೂಚನೆ ಹೊರಡಿಸಲಾಗುತ್ತಿದ್ದು, ಜೂನ್ 8 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಜೂನ್ 9ರಂದು ನಾಮಪತ್ರಗಳ ಪರಿಶೀಲನೆ ಹಾಗೂ ಜೂನ್ 11ರಂದು ಉಮೇದುವಾರಿಕೆ ಹಿಂಪಡೆಯಲು ಕಡೆಯ ದಿನವಾಗಿದೆ. ಜೂನ್ 18ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ, ಮತದಾನಕ್ಕೆ ಅವಕಾಶವಿದೆ. ಅದೇ ದಿನ ಸಂಜೆ 5 ಗಂಟೆಯ ನಂತರ, ಮತ

ಎಣಿಕೆ ಕಾರ್ಯ ನಡೆಯಲಿದೆ ಎಂದು, ಚುನಾವಣಾ ಆಯೋಗ ತಿಳಿಸಿದೆ. ರಾಜ್ಯದ 4 ರಾಜ್ಯಸಭಾ ಸ್ಥಾನಗಳು ಜೂನ್ 25ರಂದು ತೆರವಾಗಲಿದೆ. ಹಾಲಿ ಸದಸ್ಯರಾಗಿರುವ ಎಚ್.ಡಿ.ದೇವೇಗೌಡ, ಮಲ್ಲಿಕಾರ್ಜುನ ಖರ್ಗೆ, ಈರಣ್ಣ ಕಡಾಡಿ ಹಾಗೂ ನಾರಾಯಣ ಕೊರಗಪ್ಪ ಅವರ ಅಧಿಕಾರಾವಧಿ ಅಂದು ಕೊನೆಗೊಳ್ಳಲಿದೆ.

**<><><>**

**ಶಿವಮೊಗ್ಗ ಜಿಲ್ಲೆಯ ಹೊಳೆಹೊನ್ನೂರು ವ್ಯಾಪ್ತಿಯಲ್ಲಿ ಮತ್ತು ಇತರೆ ಕೆಲವೆಡೆ ಇತ್ತೀಚೆಗೆ** ಬಿರುಗಾಳಿ ಮತ್ತು ಮಳೆಯಿಂದಾಗಿ ಅನೇಕ ರೈತರ ಅಡಿಕೆ ಮರಗಳು ಧರೆಗುರುಳಿ ಸಂಭವಿಸಿದ ಹಾನಿಗೆ ಸರ್ಕಾರ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಬೇಕೆಂದು ಒತ್ತಾಯಿಸಿ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಗಿದೆ ಎಂದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಜಿಲ್ಲಾ ಮಟ್ಟದ ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**<><><>**

**ಬಾಗಲಕೋಟೆ ಜಿಲ್ಲೆಯ ಬೀಳಗಿ ಮತಕ್ಷೇತ್ರದ ಪ್ರಯಾಣಿಕರ ಸಮಸ್ಯೆಗಳಿಗೆ ತಕ್ಷಣ** ಸ್ಪಂದಿಸಿ ಪರಿಹಾರ ಕ್ರಮ ಕೈಗೊಳ್ಳುವಂತೆ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ್ ಸಾರಿಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ನವನಗರದ ಎನ್.ಡಬ್ಲ್ಯೂ.ಕೆ.ಎಸ್.ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಸೂಕ್ತ ಸಮಯದಲ್ಲಿ ಬಸ್ ಸೌಲಭ್ಯ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**<><><>**

**ಇದೇ 29 ರಂದು ನಡೆಯಲಿರುವ ದಾವಣಗೆರೆಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ** ಘಟಕ ಸಂಸ್ಥೆ; ಬಿ.ಡಿ.ಟಿ. ಎಂಜಿನಿಯರಿಂಗ್ ಕಾಲೇಜಿನ ಅಮೃತ ಮಹೋತ್ಸವ ಸಮಾರಂಭವನ್ನು ಉಪ ರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಉದ್ಘಾಟಿಸಲಿದ್ದಾರೆ.

**<><><>**

**ಬೆಂಗಳೂರು ಗ್ರಾಮಾಂತರ, ಜಿಲ್ಲೆಯ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೊಡ್ಡಬಳ್ಳಾಪುರ** ವ್ಯಾಪ್ತಿಯಲ್ಲಿ ನಿವೇಶನ ರಹಿತ ಬಡ ಕುಟುಂಬಗಳಿಗೆ 500 ನಿವೇಶನ ಹಂಚಿಕೆ ಸಂಬಂಧ ಕಾರ್ಯ ಪ್ರಗತಿಯಲ್ಲಿದ್ದು, ಇದೇ ತಿಂಗಳ ಅಂತ್ಯ ಅಥವಾ ಜೂನ್ ತಿಂಗಳಲ್ಲಿ ನಿವೇಶನ ವಿತರಣೆ ಮಾಡಲಾಗುವುದು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತಗಳ ಸರ್ವಾಂಗೀಣ

ಅಭಿವೃದ್ಧಿಗಳಿಗೆ ಒತ್ತು ನೀಡಲಾಗುತ್ತಿದೆ ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ.

**<><><>**

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**<><><>**

- **ಕನ್ನಡಪರ ಹಾಗೂ ರೈತಪರ ಸಂಘಟನೆ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯಲು ಸರ್ಕಾರದ ನಿರ್ಧಾರ.**

- **ರಾಜ್ಯ ಸರ್ಕಾರ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣದಲ್ಲಿ ನಿರತವಾಗಿದೆ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

- **ತಯಾರಿಕಾ ವಲಯದ ಬಲವರ್ಧನೆ, ಕೈಗಾರಿಕಾ ಮೂಲಸೌಕರ್ಯ ಆಧುನೀಕರಣ ಮತ್ತು ಜಾಗತಿಕ ಮಟ್ಟದ ಉದ್ಯಮ ಸ್ಥಾಪನೆಗೆ ಕೇಂದ್ರ ಸರ್ಕಾರದ ಆದ್ಯತೆ.**

- **ಕೇಂದ್ರ ಸರಕಾರ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿ, ಹಳೆಯ ಪದ್ಧತಿಯಂತೆ ಸಿಇಟಿಗೆ ಅವಕಾಶ ನೀಡಬೇಕು – ಸಚಿವ ಡಾ.ಎಂ.ಸಿ. ಸುಧಾಕರ್.**

- **ಕರ್ನಾಟಕದ 4 ಸ್ಥಾನಗಳು ಸೇರಿದಂತೆ, 10 ರಾಜ್ಯಗಳ 24 ರಾಜ್ಯಸಭಾ ಸ್ಥಾನಗಳಿಗೆ, ಜೂನ್ 18ರಂದು ಚುನಾವಣೆ ಘೋಷಣೆ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**
******END******